ಕರ್ನಾಟಕ ಸರ್ಕಾರ

# ಕಾಲೇಜು ಶಿಕ್ಷಣ ಇಲಾಖೆ

ಸಂಖ್ಯೆ: ಕಾಶಿಇ/ನೇವಿ-1/ಅಉಅ/97/2021-22

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ,
ಉನ್ನತ ಶಿಕ್ಷಣ ಸೌಧ,
ಶೇಷಾದ್ರಿ ರಸ್ತೆ, ಬೆಂಗಳೂರು-01,
ದಿನಾಂಕ:28-02-2022

## ಪ್ರಕಟಣೆ

ವಿಷಯ: 2021-22ನೇ ಶೈಕ್ಷಣಿಕ ಸಾಲಿಗೆ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿನ ಹೆಚ್ಚುವರಿ ಬೋಧನಾ ಕಾರ್ಯಭಾರಕ್ಕೆ ಅತಿಥಿ ಉಪನ್ಯಾಸಕರನ್ನು ಆಯ್ಕೆ ಮಾಡಿಕೊಳ್ಳುವ ಬಗ್ಗೆ.

ಉಲ್ಲೇಖ: ಈ ಕಛೇರಿಯ ಇದೇ ಕ್ರಮಾಂಕದ ಸುತ್ತೋಲೆ ದಿನಾಂಕ:28.01.2022.

* * * * * * *

2021-22ನೇ ಶೈಕ್ಷಣಿಕ ಸಾಲಿನಲ್ಲಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಖಾಯಂ ಉಪನ್ಯಾಸಕರಿಗೆ ಕಾರ್ಯಭಾರ ಹಂಚಿಕೆ ಮಾಡಿದ ನಂತರ ಉಳಿಕೆಯಾಗುವ ಬೋಧನಾ ಕಾರ್ಯಭಾರಕ್ಕೆ ಅಗತ್ಯವಿರುವ ಅರ್ಹ ಅತಿಥಿ ಉಪನ್ಯಾಸಕರನ್ನು ಆಯ್ಕೆ ಮಾಡಿಕೊಳ್ಳುವ ಸಂಬಂಧ ಆಯೋಜಿಸಲಾಗಿದ್ದ ಕೌನ್ಸಿಲಿಂಗ್‌ನಲ್ಲಿ ಅಭ್ಯರ್ಥಿಗಳು ಅವರು ಆಯ್ಕೆ ಮಾಡಿಕೊಂಡಿರುವ ಕಾಲೇಜುಗಳಲ್ಲಿ ಕರ್ತವ್ಯಕ್ಕೆ ವರದಿ ಮಾಡಿಕೊಂಡಿರುತ್ತಾರೆ.

ಉಳಿದಂತೆ, ಕೆಲವು ಅಭ್ಯರ್ಥಿಗಳು ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸುವ ಸಂದರ್ಭದಲ್ಲಿ ತಪ್ಪು ಮಾಹಿತಿಗಳನ್ನು (ಉದಾ: ಸೇವಾ ಅನುಭವದ ವಿವರ, ಸ್ನಾತಕೋತ್ತರ ಪದವಿ ಅಂಕಗಳು, ಪಿಹೆಚ್.ಡಿ./ಎಂ.ಫಿಲ್ ವಿವರ, ಇತ್ಯಾದಿ) ನೀಡಿದ್ದ ಪ್ರಯುಕ್ತ ಹಲವಾರು ಮನವಿಗಳು ಸ್ವೀಕೃತವಾದ ಕಾರಣ, ಅಭ್ಯರ್ಥಿಗಳು ಆನ್‌ಲೈನ್ ಅರ್ಜಿಯಲ್ಲಿ ನೀಡಿರುವ ತಪ್ಪು ಮಾಹಿತಿಗಳನ್ನು ಸರಿಪಡಿಸಲು 02 ದಿನಗಳ ಕಾಲಾವಕಾಶ ನೀಡಲಾಗಿತ್ತು. ಆದಾಗ್ಯೂ, ಆನ್‌ಲೈನ್ ಅರ್ಜಿಯಲ್ಲಿ ನೀಡಿರುವ ಮಾಹಿತಿಗಳನ್ನು ಸರಿಪಡಿಸಲು/ತಿದ್ದುಪಡಿ ಮಾಡಲು ಪುನಃ ಮನವಿಗಳು ಸ್ವೀಕೃತವಾಗುತ್ತಿರುವ ಹಿನ್ನೆಲೆಯಲ್ಲಿ ದಿನಾಂಕ:28.02.2022 ರಿಂದ ದಿನಾಂಕ:02.03.2022 ರವರೆಗೆ ಆನ್‌ಲೈನ್ ಅರ್ಜಿಯಲ್ಲಿ ನೀಡಿರುವ ಮಾಹಿತಿಗಳನ್ನು ಸರಿಪಡಿಸಲು/ತಿದ್ದುಪಡಿ ಮಾಡಲು ಅವಕಾಶ ನೀಡಲಾಗಿದೆ.

ಸದರಿ ಅಭ್ಯರ್ಥಿಗಳಿಗೆ, ಪ್ರಸ್ತುತ ಕಾಲೇಜುಗಳಲ್ಲಿ ಉಳಿಕೆಯಾಗಿರುವ ಕಾರ್ಯಭಾರಕ್ಕೆ ಕೌನ್ಸಿಲಿಂಗ್ ಮೂಲಕ ಕಾಲೇಜುಗಳನ್ನು ಆಯ್ಕೆ ಮಾಡಿಕೊಳ್ಳಲು ಶೀಘ್ರದಲ್ಲಿಯೇ ಅವಕಾಶ ಕಲ್ಪಿಸಲಾಗುವುದು.

ಅಭ್ಯರ್ಥಿಗಳು ವಾಸ್ತವ ಮಾಹಿತಿಯನ್ನು ಮಾತ್ರ ನಮೂದಿಸುವುದು. ಒಂದು ವೇಳೆ ವಾಸ್ತವ ಮಾಹಿತಿಯನ್ನು ಮರೆಮಾಚಿ, ಪುನಃ ತಪ್ಪು ಮಾಹಿತಿಯನ್ನು ನೀಡಿದಲ್ಲಿ ಮುಂದಿನ ಆಗು-ಹೋಗುಗಳಿಗೆ ಸಂಬಂಧಪಟ್ಟ ಅಭ್ಯರ್ಥಿಗಳೇ ಜವಾಬ್ದಾರರಾಗಿರುತ್ತಾರೆ ಮತ್ತು ಅಂತಹ ಅಭ್ಯರ್ಥಿಗಳನ್ನು ಯಾವುದೇ ಕಾರಣಕ್ಕೂ ಅತಿಥಿ ಉಪನ್ಯಾಸಕರ ಆಯ್ಕೆ ಪ್ರಕ್ರಿಯೆಗೆ ಪರಿಗಣಿಸುವುದಿಲ್ಲ.

28/02/2022

ಮುಖ್ಯ ಆಡಳಿತಾಧಿಕಾರಿಗಳು
ಕಾಲೇಜು ಶಿಕ್ಷಣ ಇಲಾಖೆ